# ಆಡಿದನೋ ರಂಗ ಅದ್ಭುತದಿಂದಲಿ

1. **Ref.:** Dasara Padagalu – Purandara Dasara Keerthane, Samyukta Samputa, Edited by Shri Pavanje Gururao, Sriman Madhwa Siddantha Granthalaya, Udupi, page No. 40.
2. **Ref.:** Purandara Sahitya Darshana, Samputa 4, Keerthana Darshana edited by Prof. S.K. Ramachandra Rao, page No. 157.
3. **Ref.:** Shri Purandara Dasara Sahitya Part – 4, Krishna Leela, edited by Shri Betageri Krishna Sharma and Shri Bengeri Huchha Rayaru, page No. 97.
4. **Ref.:** Lyrics mentioned here are as per Ref. 1. The wordings in Ref. 2 are similar to Ref. 1. The wordings in Ref. 3 are slightly different which are not considered here.
5. **Note:** Singer has followed lyrics as in Ref. 1.

ರಾಗ: ಆರಭಿ ತಾಳ: ಆದಿ

ಆಡಿದನೋ ರಂಗ ಅದ್ಭುತದಿಂದಲಿ
ಕಾಳಿಂಗನ ಫಣೆಯಲಿ || ಪ ||

ಪಾಡಿದವರಿಗೆ ಬೇಡಿದ ವರಗಳ
ನೀಡುತಲಿ ದಯಮಾಡುತಲಿ ನಲಿ-
ದಾಡುತಲಿ ಬೆಣ್ಣೆ ಬೇಡುತಲಿ ಕೃಷ್ಣ || ಅಪ ||

ಅಂಬುರುಹೋದ್ಭವ ಅಖಿಳ ಸುರರು ಕೂಡಿ
ಅಂಬರದಲಿ ನಿಂತು ಅವರ್) ಸ್ತುತಿಸೆ
ರಂಭೆ ಊರ್ವಶಿ ರಮಣಿಯರೆಲ್ಲರು
ಚಂದದಿಂ ಭರತನಾಟ್ಯವ ನಟಿಸೆ
ಝುಂತಟ ತಕಧಿಮಿ ತಧಿಗಿಣಿ ತೋಂ ಎಂದು
ಝುಂಪೆ ತಾಳದಿ ತುಂಬುರುನೊಪ್ಪಿಸೆ
ಧಾಮ ಪ ಪಾ ಧ ಸ ರೀ ಎಂದು ಧ್ವನಿಯಿಂದ
ನಾರದ ತುಂಬುರರ್ಗಾನ ಮಾಡಲು
ನಂದಿಯು ಮದ್ದಲೆ ಚೆಂದದಿ ಹಾಕಲು || 1 ||

ಫಣವ ಮೆಟ್ಟಿ ಬಾಲವ ಕೈಯಲಿ ಪಿಡಿದು
ಫಳಫಳಿಸುತ್ತ ನಾಟ್ಯವನಾಡೆ
ಚಂದ್ರ ಮಂಡಲದಂತೆ ಪೊಳೆಯುವ ಮುಖದೊಳು
ಚಲಿಸುವ ನೀಲ ಕೇಶಗಳಾಡೆ
ಕಾಲಲಂದುಗೆ ಗೆಜ್ಜೆ ಘಲು ಘಲು ಘಲಿರೆನುತ
ಉಡಿಗೆಜ್ಜೆ ಘಂಟೆಗಳಾಡೆ
ದುಷ್ಟ ಕಾಳಿಂಗನ ಮೆಟ್ಟಿ ಭರದಿಂದ
ಪುಟ್ಟ ಪಾದವ ಇಟ್ಟು ಶ್ರೀ ಕೃಷ್ಣನು
ಮೆಟ್ಟಿದನು ತಕ ಧಿಮಿ ತಧಿಕೆನುತ || 2 ||

ಸುರರು ಪುಷ್ಪದ ವೃಷ್ಟಿಯ ಕರೆಯಲು
ಸುದತಿಯರೆಲ್ಲರು ಪಾಡಲು
ನಾಗಕನ್ನಿಕೆಯರು ನಾಥನ ಬೇಡಲು
ನಾನಾ ವಿಧದಿ ಸ್ತುತಿ ಮಾಡಲು
ರಕ್ಕಸರೆಲ್ಲರು ಕಕ್ಕಸವನೆ ಕಂಡು
ದಿಕ್ಕು ದಿಕ್ಕುಗಳಿಗೆ ಓಡಲು
ಚಿಕ್ಕವನಿವನಲ್ಲ ಪುರಂದರ ವಿಠ್ಠಲ
ವೆಂಕಟರಮಣನ ಬೇಗ ಯಶೋದೆ
ಬಿಂಕದೊಳೆತ್ತಿ ಮುದ್ದಾಡೆ ಶ್ರೀ ಕೃಷ್ಣನ || 3 ||

**ಕಠಿಣ ಪದಗಳ ಅರ್ಥ ಮತ್ತು ಟಿಪ್ಪಣಿಗಳು:**

ಕಾಳಿಂಗ ಮರ್ದನದ ಬಣ್ಣನೆಯ ಮತ್ತೊಂದು ರೀತಿಯನ್ನು ಈ ಹಾಡಿನಲ್ಲಿ ನೋಡಬಹುದು. ಇದರಲ್ಲಿ ಹೆಚ್ಚಾಗಿ ಶ್ರೀ ಕೃಷ್ಣನ ನರ್ತನದ ವಿವಿಧ ರೀತಿಗಳನ್ನು ವರ್ಣಿಸಲಾಗಿದೆ.

**ಅಂಬುರು ಹೋದ್ಭವ** – ಬ್ರಹ್ಮ.

**ಫಣವ** – ಹೆಡೆಯನ್ನು.

**ಕಕ್ಕಸ** – ಆಶ್ಚರ್ಯ; ಭಯಾನಕವಾದುದು.

**Classification:** Keerthane
**Ankita:** purandara vittala
**Location:** NA
**Category:** Krishna Leele, Navaratna Malike
**Sub-Category:** ranga, Krishna, kalinga, benne, sura, akasha, narada, nandi, kai Chandra, gejje, pushpa, srinivasa, Yashode,
**Pravachana:** NA
**Explanation:** NA